**Akashvani : Bangalore**
**Regional Bulletin In Kannada**
**ಆಕಾಶವಾಣಿ ಬೆಂಗಳೂರು**

**ಪ್ರದೇಶ ಸಮಾಚಾರ**

**05.04.2024 / 18.40 hrs**

<u>**ಮುಖ್ಯಾಂಶಗಳು**</u>

**೧. ಡಾ.ಬಾಬು ಜಗಜೀವನ್ ರಾಮ್ ಜಯಂತಿ ಅಂಗವಾಗಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರಿಂದ ಹಸಿರು ಕ್ರಾಂತಿ ಹರಿಕಾರನಿಗೆ ಗೌರವ ನಮನ**

**೨. ಮಂಡ್ಯ ಲೋಕಸಭಾ ಕ್ಷೇತ್ರದ ಸಂಸದೆ ಸುಮಲತಾ ಅಂಬರೀಶ್ ಬಿಜೆಪಿ ಸೇರ್ಪಡೆ**

**೩. ಲೋಕಸಭಾ ಚುನಾವಣಾ ಹಿನ್ನಲೆ ರಾಜ್ಯದೆಲ್ಲೆಡೆ ಮತದಾರರ ಜಾಗೃತಿ ಕಾರ್ಯಕ್ರಮ ಚುರುಕು**

**೪. ವಿಜಯನಗರ ಜಿಲ್ಲೆಯಲ್ಲಿ ಕುಡಿಯುವ ನೀರು ಸರಬರಾಜು ಮತ್ತು ಬರ ನಿರ್ವಹಣೆಗೆ ಅಗತ್ಯ ಕ್ರಮ**

**<><*<><>*><>**

ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಡಾ. ಬಾಬು ಜಗಜೀವನ್ ರಾಮ್ ಅವರ ೧೧೭ನೇ ಜನ್ಮ ದಿನಾಚರಣೆ ಪ್ರಯುಕ್ತ ವಿಧಾನ ಸೌಧದಲ್ಲಿರುವ ಪ್ರತಿಮೆಗೆ ಮಾಲಾರ್ಪಣೆ ಮಾಡಿ ಭಾವಚಿತ್ರಕ್ಕೆ ಪುಷ್ಪಾರ್ಚನೆ ಮಾಡಿದರು. ಸಮಾಜ ಕಲ್ಯಾಣ ಸಚಿವ ಹೆಚ್.ಸಿ. ಮಹದೇವಪ್ಪ, ಹಿರಿಯ ಶಾಸಕ ಈ. ತುಕಾರಾಮ್, ಮಾಜಿ ಸಚಿವ ಹೆಚ್.ಆಂಜನೇಯ, ವಿಧಾನ ಪರಿಷತ್ ಸದಸ್ಯ ಸುದಾಮ ದಾಸ್, ಮಹಿಳಾ ಆಯೋಗದ ಅದ್ಯಕ್ಷೆ ಡಾ. ನಾಗಲಕ್ಷ್ಮಿ ಸೇರಿ ಹಲವರು ಉಪಸ್ಥಿತರಿದ್ದರು. ಬೆಂಗಳೂರು ಗ್ರಾಮಾಂತರ ಜಿಲ್ಲೆಯಲ್ಲಿ ಮಾಜಿ ಉಪಪ್ರಧಾನಿ ಹಾಗೂ ಹಸಿರು ಕ್ರಾಂತಿಯ ಹರಿಕಾರ ಡಾ.ಬಾಬು ಜಗಜೀವನರಾಮ್ ರವರ ೧೧೭ನೇ ಜನ್ಮ ದಿನಾಚರಣೆಯನ್ನು ಆಚರಿಸಲಾಯಿತು. ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ನಡೆದ ಕಾರ್ಯಕ್ರಮದಲ್ಲಿ ಜಿಲ್ಲಾಧಿಕಾರಿ ಡಾ.ಎನ್.ಶಿವಶಂಕರ ಬಾಬು ಜಗಜೀವನರಾಮ್ ಭಾವಚಿತ್ರಕ್ಕೆ ನಮನ ಸಲ್ಲಿಸಿ, ಅವರ ಸಾಧನೆಗಳನ್ನು ಸ್ಮರಿಸಿದರು. ಚಿತ್ರದುರ್ಗ ಜಿಲ್ಲಾ ಪಂಚಾಯತಿ ಸಭಾಂಗಣದಲ್ಲಿ ಆಯೋಜಿಸಲಾದ ಕಾರ್ಯಕ್ರಮದಲ್ಲಿ ಜಿಲ್ಲಾ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಸೋಮಶೇಖರ್, ಜಗಜೀವನ್‌ರಾಮ್ ಅವರ ಭಾವಚಿತ್ರಕ್ಕೆ ಪುಷ್ಪ ನಮನ ಸಲ್ಲಿಸಿದರು. ಚಿಕ್ಕಬಳ್ಳಾಪುರ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್ ಹಾಗೂ ಸಮಾಜ ಕಲ್ಯಾಣ ಇಲಾಖೆ ಸಹಯೋಗದಲ್ಲಿ ಇಂದು ಆಯೋಜಿಸಿದ್ದ ಜಯಂತಿ ಕಾರ್ಯಕ್ರಮವನ್ನು ಬಾಬೂಜಿ ಅವರ ಭಾವಚಿತ್ರಕ್ಕೆ ಪುಷ್ಪನಮನ ಸಲ್ಲಿಸುವ ಮೂಲಕ ಉದ್ಘಾಟಿಸಲಾಯಿತು. ಗದಗ ಜಿಲ್ಲಾಡಳಿತ ಭವನದ ಮುಖ್ಯ ಸಭಾಂಗಣದಲ್ಲಿ ಬಾಬು ಜಗಜೀವನರಾಮ್ ಅವರ ಜಯಂತ್ಯೋತ್ಸವ ಕಾರ್ಯಕ್ರಮದಲ್ಲಿ ಅವರ ಭಾವಚಿತ್ರಕ್ಕೆ ಜಿಲ್ಲಾಧಿಕಾರಿ ವೈಶಾಲಿ.ಎಂ.ಎಲ್. ಪುಷ್ಪನಮನ ಸಲ್ಲಿಸಿದರು. ಯಾದಗಿರಿ ಜಿಲ್ಲಾಡಳಿತ ಭವನದ ಆಡಿಟೋರಿಯಂ ಸಭಾಂಗಣದಲ್ಲಿ ಜಗಜೀವನರಾಮ್ ಅವರ ಜಯಂತಿ ಆಚರಿಸಿಲಾಯಿತು. ಹಾವೇರಿ ಜಿಲ್ಲಾಧಿಕಾರಿಗಳ ಕಚೇರಿ ಹಾಗೂ ದಾವಣಗೆರೆ ಜಿಲ್ಲಾಧಿಕಾರಿ ಕಚೇರಿಯಲ್ಲಿಂದು ಹಸಿರು ಕ್ರಾಂತಿಯ ಹರಿಕಾರನ ಜಯಂತಿಯನ್ನು ಸಾಂಕೇತಿಕವಾಗಿ ಆಚರಿಸಲಾಯಿತು. ಮಂಡ್ಯದ ಡಿಸಿ ಪಾರ್ಕ್ ಎದುರು ಇರುವ ಜಗಜೀವನ್‌ರಾಮ್ ಪ್ರತಿಮೆಗೆ ಜಿಲ್ಲಾಧಿಕಾರಿ ಡಾ.ಕುಮಾರ ಮಾಲಾರ್ಪಣೆ ಮಾಡಿದರು.

<><*<><>*><>

ಕಳೆದ ಲೋಕಸಭಾ ಚುನಾವಣೆಯಲ್ಲಿ ಮಂಡ್ಯ ಲೋಕಸಭಾ ಮತಕ್ಷೇತ್ರದಿಂದ ಪಕ್ಷೇತರ ಅಭ್ಯರ್ಥಿಯಾಗಿ ಗೆದ್ದಿದ್ದ ಸುಮಲತ ಅಂಬರೀಶ್ ಹಾಗೂ ಭಾರತ ತಂಡದ ಮಾಜಿ ಕ್ರಿಕೆಟ್ ಆಟಗಾರ ದೊಡ್ಡ ಗಣೇಶ್ ಇಂದು ವಿಧ್ಯುಕ್ತವಾಗಿ ಬಿಜೆಪಿ ಪಕ್ಷಕ್ಕೆ ಸೇರ್ಪಡೆಗೊಂಡರು. ಸುಮಲತ ಅಂಬರೀಶ್ ಜೊತೆಗೆ ಮಾಜಿ ಲೋಕಸಭಾ ಸದಸ್ಯ ಎಲ್.ಆರ್.ಶಿವರಾಮೇಗೌಡ ಹಾಗೂ ಸುಮಲತ ಅಂಬರೀಶ್ ಬೆಂಬಲಿಗರು ಕೂಡ ಬಿಜೆಪಿಗೆ ಸೇರ್ಪಡೆಯಾದರು. ಬಿಜೆಪಿ ಸಂಸದೀಯ ಮಂಡಳಿ ಸದಸ್ಯ ಬಿ.ಎಸ್.ಯಡಿಯೂರಪ್ಪ, ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ, ಕೇಂದ್ರ ಸಚಿವ ಪ್ರಹ್ಲಾದ್ ಜೋಷಿ, ಮಾಜಿ ಸಚಿವ ಸಿ.ಟಿ.ರವಿ ಸೇರಿದಂತೆ ಬಿಜೆಪಿಯ ಹಲವು ಹಿರಿಯರು ಉಪಸ್ಥಿತರಿದ್ದರು.

<><*<><>*><>

ಲೋಕಸಭಾ ಸಾರ್ವತ್ರಿಕ ಚುನಾವಣೆ ಎರಡನೇ ಹಂತಕ್ಕೆ ಇದೇ ೧೨ ರಿಂದ ನಾಮಪತ್ರ ಸಲ್ಲಿಕೆ ಕಾರ್ಯ ಆರಂಭಗೊಳ್ಳಲಿದೆ. ರಾಜಕೀಯ ಪಕ್ಷಗಳು ಮತ್ತು ಚುನಾವಣೆಗೆ ಸ್ಪರ್ಧಿಸುವ ಅಭ್ಯರ್ಥಿಗಳು ತಮ್ಮ ನಾಮಪತ್ರಗಳು ತಿರಸ್ಕಾರವಾಗದಂತೆ, ಎಚ್ಚರಿಕೆಯಿಂದ ಅರ್ಜಿಯನ್ನು ಭರ್ತಿ ಮಾಡುವಂತೆ ಮತ್ತು ಈ ಕುರಿತಂತೆ ಜಿಲ್ಲಾ ಚುನಾವಣಾಧಿಕಾರಿಗಳ ಕಚೇರಿಯ ನೆರವು ಪಡೆಯುವಂತೆ ಉತ್ತರಕನ್ನಡ ಜಿಲ್ಲಾ ಚುನಾವಣಾಧಿಕಾರಿ ಗಂಗೂಬಾಯಿ ಮಾನಕರ ಹೇಳಿದ್ದಾರೆ. ಕಾರವಾರದಲ್ಲಿಂದು ರಾಜಕೀಯ ಪಕ್ಷಗಳಿಗೆ ನಾಮಪತ್ರ ಸಲ್ಲಿಕೆ ಹಾಗೂ ಪಾಲಿಸಬೇಕಾದ ಕ್ರಮಗಳ ಕುರಿತು ಆಯೋಜಿಸಿದ್ದ ಸಭೆಯಲ್ಲಿ ಮಾತನಾಡಿದ ಅವರು, ಜಿಲ್ಲೆಯಲ್ಲಿ ಚುನಾವಣೆಗೆ ಸ್ಪರ್ಧಿಸುವ ರಾಜಕೀಯ ಪಕ್ಷಗಳು ಮತ್ತು ಅಭ್ಯರ್ಥಿಗಳಿಗೆ ಏಪ್ರಿಲ್ ೬ ರಿಂದ ನಾಮಪತ್ರ ಸಲ್ಲಿಕೆಯ ಅರ್ಜಿಗಳನ್ನು ವಿತರಿಸಲಾಗುವುದು ಎಂದರು. ಏಪ್ರಿಲ್ ೧೨ ರಿಂದ ೧೯ರವರೆಗೆ ಚುನವಣಾಧಿಕಾರಿಗಳ ಕಚೇರಿಯಲ್ಲಿ ನಾಮಪತ್ರ ಸಲ್ಲಿಸಬಹುದಾಗಿದ್ದು, ಏಪ್ರಿಲ್ ೨೦ ರಂದು ನಾಮಪತ್ರಗಳ ಪರಿಶೀಲನೆ ಮತ್ತು ಏಪ್ರಿಲ್ ೨೨ ರಂದು ನಾಮಪತ್ರ ಹಿಂಪಡೆಯಲು ಕೊನೆಯ ದಿನಾಂಕವಾಗಿದೆ ಎಂದು ತಿಳಿಸಿದರು.

<><*<><>*><>

ಇದೇ ೨೬ರಂದು ಮೊದಲ ಹಂತದಲ್ಲಿ ರಾಜ್ಯದ ೧೪ ಲೋಕಸಭಾ ಕ್ಷೇತ್ರಗಳಿಗೆ ಚುನಾವಣೆ ನಡೆಯಲಿದ್ದು, ಜಿಲ್ಲೆಗಳಲ್ಲಿ ಮತದಾರರ ಜಾಗೃತಿ ಕಾರ್ಯಕ್ರಮಗಳು ಚುರುಕುಗೊಂಡಿವೆ. ಬೆಂಗಳೂರು ಗ್ರಾಮಾಂತರ ಜಿಲ್ಲೆಯ ದೊಡ್ಡಬಳ್ಳಾಪುರದ ನ್ಯಾಯಾಲಯದ ಆವರಣದಲ್ಲಿ ಜಿಲ್ಲಾ ಸ್ವೀಪ್ ಸಮಿತಿ ವತಿಯಿಂದ ಮತದಾನ ಜಾಗೃತಿ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿತ್ತು. ಅಪರ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರಾದ ರಮೇಶ್ ದುರುಗಪ್ಪ ಏಕಬೋಟೆ ಮತದಾನ ಪ್ರತಿಜ್ಞಾ ವಿಧಿ ಬೋಧಿಸಿದರು. ಮತದಾನ ಪ್ರಜಾಪ್ರಭುತ್ವದ ಸದೃಢತೆಗೆ ಪೂರಕವಾಗಿದ್ದು, ಚುನಾವಣೆಯಲ್ಲಿ ಎಲ್ಲ ಮತದಾರರು ಕಡ್ಡಾಯವಾಗಿ ಮತದಾನ ಮಾಡಬೇಕೆಂದು ಅವರು ಕರೆ ನೀಡಿದರು. ಕೋಲಾರ ಜಿಲ್ಲೆಯ ಮುಳಬಾಗಿಲು ನಗರಸಭೆ ಹಾಗೂ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಸಹಯೋಗದೊಂದಿಗೆ ನಗರದ ಅಂಬೇಡ್ಕರ್ ವೃತ್ತದಲ್ಲಿ ಮೇಣದ ಬತ್ತಿಗಳನ್ನು ಹಚ್ಚುವ ಮೂಲಕ ಮತದಾನದ ಕುರಿತು ಸಾರ್ವಜನಿಕರಲ್ಲಿ ಜಾಗೃತಿ ಮೂಡಿಸಲಾಯಿತು. ಸಾರ್ವತ್ರಿಕ ಲೋಕಸಭಾ ಚುನಾವಣೆ ಹಿನ್ನಲೆಯಲ್ಲಿ ಮಂಡ್ಯ ಜಿಲ್ಲೆಯ ಪಾಂಡವಪುರ ತಾಲ್ಲೂಕಿನಲ್ಲಿ ಸ್ವೀಪ್ ಚಟುವಟಿಕೆ ಕಾರ್ಯಕ್ರಮಕ್ಕೆ ತಾಲ್ಲೂಕು ಪಂಚಾಯಿತಿ ಕಾರ್ಯನಿರ್ವಹಣಾಧಿಕಾರಿ ಇಟಿ ಲೋಕೇಶ್ ಮೂರ್ತಿ ಚಾಲನೆ ನೀಡಿದರು. ಬಳಿಕ ಮಾತನಾಡಿದ ಅವರು, ದೇಶದ ಸುಭದ್ರತೆ ಹಾಗೂ ಉತ್ತಮ ನಾಯಕತ್ವಕ್ಕೆ ಮತ ಚಲಾಯಿಸುವ ಮೂಲಕ ಉತ್ತಮ ಅಭ್ಯರ್ಥಿಗಳನ್ನು ಸಂಸತ್‌ಗೆ ಕಳುಹಿಸಲು

ಯುವ ಮತದಾರರು ಮುಂದಾಗಬೇಕೆಂದು ಕರೆ ನೀಡಿದರು. ಗದಗ ಜಿಲ್ಲಾ ಮತ್ತು ನರಗುಂದ ತಾಲ್ಲೂಕು ಚುನಾವಣೆ ಸ್ವೀಪ್ ಸಮಿತಿ ವತಿಯಿಂದ ಮತದಾನ ಜಾಗೃತಿ ಜಾಥ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿತ್ತು. ಗ್ರಾಮೀಣ ಪ್ರದೇಶಗಳ ಮತದಾರರಲ್ಲಿ ಕಡ್ಡಾಯ ಮತದಾನ ಬಗ್ಗೆ ಮಹಿಳಾ ಸ್ವ-ಸಹಾಯ ಸಂಘಗಳ ಕಾರ್ಯಕರ್ತೆಯರು ಜಾಗೃತಿ ಮೂಡಿಸಿ, ಲೋಕಸಭೆ ಚುನಾವಣೆಯಲ್ಲಿ ಮತದಾನದ ಪ್ರಮಾಣ ಹೆಚ್ಚಳಕ್ಕೆ ಶ್ರಮವಹಿಸಬೇಕೆಂದು ಗದಗ ಜಿಲ್ಲಾ ಪಂಚಾಯತ ಉಪಕಾರ್ಯದರ್ಶಿ ಹಾಗೂ ಜಿಲ್ಲಾ ಸ್ವೀಪ್ ಸಮಿತಿಯ ನೋಡಲ್ ಅಧಿಕಾರಿ ಸಿ.ಬಿ.ದೇವರಮನಿ ಹೇಳಿದರು. ಗ್ರಾಮೀಣ ಪ್ರದೇಶಕ್ಕಿಂತ ನಗರ ಪ್ರದೇಶದಲ್ಲಿ ಮತದಾನದ ಸಂಖ್ಯೆ ಕಡಿಮೆ ಇದೆ. ಮತದಾನದ ಪ್ರಮಾಣ ಕಡಿಮೆ ಇದ್ದೆಡೆ ಅರಿವು ಮೂಡಿಸುವ ಮೂಲಕ ಮತದಾರರನ್ನು ಮತಗಟ್ಟೆಗಳಿಗೆ ಕರೆತರುವ ಸಲುವಾಗಿ ಮತದಾನ ಜಾಗೃತಿ ಜಾಥಾವನ್ನು ಹಮ್ಮಿಕೊಳ್ಳಲಾಗಿದೆ ಎಂದು ಧಾರವಾಡ ಜಿಲ್ಲಾ ಚುನಾವಣಾಧಿಕಾರಿಗಳು ಆಗಿರುವ ಜಿಲ್ಲಾಧಿಕಾರಿ ದಿವ್ಯಪ್ರಭು ಜಿ.ಆರ್.ಜೆ. ಹೇಳಿದ್ದಾರೆ. ಧಾರವಾಡ-ಹುಬ್ಬಳ್ಳಿಯ ಕಿತ್ತೂರ ರಾಣಿ ಚೆನ್ನಮ್ಮ ವೃತ್ತದಲ್ಲಿ ಆಯೋಜಿಸಿದ್ದ ಮತದಾನ ಜಾಥಾದಲ್ಲಿ ಸ್ತಬ್ಧ ಚಿತ್ರ ಹಾಗೂ ವಿಡಿಯೋ ವಾಹನ ಅನಾವರಣ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಅವರು ಮಾತನಾಡಿದರು. ಯಾದಗಿರಿ ಮತ್ತು ರಾಯಚೂರು ಲೋಕಸಭಾ ಚುನಾವಣೆ ಶಾಂತಿಯುತವಾಗಿ ಯಶಸ್ವಿಗೊಳಿಸಲು ಚುನಾವಣಾ ಇಲಾಖೆ ಮತ್ತು ತಾಲ್ಲೂಕು ಜಿಲ್ಲಾಡಳಿತ ಸಕಲ ಸಿದ್ಧತೆ ಮಾಡಿಕೊಂಡಿದೆ ಎಂದು ಯಾದಗಿರಿ ಜಿಲ್ಲೆಯ ಸುರಪುರ ಚುನಾವಣಾಧಿಕಾರಿ ಕಾವ್ಯಾರಾಣಿ ತಿಳಿಸಿದ್ದಾರೆ. ಯಾದಗಿರಿ ಜಿಲ್ಲೆಯ ಸುರಪುರ ನಗರದ ತಹಶೀಲ್ದಾರ್ ಕಚೇರಿಯಲ್ಲಿ ಈ ಬಗ್ಗೆ ಮಾಹಿತಿ ನೀಡಿದ ಅವರು, ಉಪ ಚುನಾವಣೆಗೆ ಇದೇ ೧೨ರಂದು ನಾಮಪತ್ರ ಸಲ್ಲಿಕೆಗೆ ಪ್ರಕ್ರಿಯೆ ಆರಂಭವಾಗಲಿದ್ದು, ಇದೇ ೧೯ ಕೊನೆ ದಿನವಾಗಿದೆ. ಏಪ್ರಿಲ್ ೨೦ರಂದು ನಾಮಪತ್ರಗಳ ಪರಿಶೀಲನೆ, ಹಾಗೂ ೨೨ ನಾಮಪತ್ರ ಹಿಂಪಡೆಯಲು ಕಡೆ ದಿನವಾಗಿದೆ. ಮೇ ೭ರಂದು ಮತದಾನ ನಡೆಯಲಿದ್ದು ಜೂನ್ ೪ರಂದು ಮತ ಏಣಿಕೆ ನಡೆಯಲಿದೆ ಎಂದು ಮಾಹಿತಿ ನೀಡಿದರು.

**<><*<><>*><>**

ವಿಜಯನಗರ ಜಿಲ್ಲೆಯ ನಗರ ಪ್ರದೇಶ ಹಾಗೂ ಎಲ್ಲಾ ಗ್ರಾಮ ಪಂಚಾಯತ್ ವ್ಯಾಪ್ತಿಯಲ್ಲಿ ಕುಡಿಯುವ ನೀರು ಸರಬರಾಜು ಮತ್ತು ಬರ ನಿರ್ವಹಣೆಗೆ ಅಗತ್ಯ ಕ್ರಮ ಕೈಗೊಳ್ಳಲಾಗಿದೆ ಎಂದು ಜಿಲ್ಲಾಧಿಕಾರಿಗಳಾದ ಎಂ.ಎಸ್.ದಿವಾಕರ ತಿಳಿಸಿದ್ದಾರೆ. ಜಿಲ್ಲಾಧಿಕಾರಿಗಳ ಕಚೇರಿಯ ಸಭಾಂಗಣದಲ್ಲಿ ನಡೆದ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ವಿಜಯನಗರ ಜಿಲ್ಲೆಯಲ್ಲಿ ೭ ತಾಲೂಕುಗಳನ್ನು ಸರ್ಕಾರ ಬರಪೀಡಿತ ಪ್ರದೇಶವೆಂದು ಘೋಷಿಸಿದೆ. ಯಾವುದೇ ರೀತಿಯ ಕುಡಿಯುವ ನೀರಿನ ಮತ್ತು ಮೇವಿನ ಸಮಸ್ಯೆ ಉದ್ಭವಿಸಿದರೆ ತಕ್ಷಣ ಸ್ಪಂದಿಸಲು ತಹಶೀಲ್ದಾರ ಮತ್ತು ಕಾರ್ಯನಿರ್ವಾಹಕ ಅಧಿಕಾರಿಗಳು, ತಾಲ್ಲೂಕು ಪಂಚಾಯತ್ ಇವರಿಗೆ ನಿರ್ದೇಶನ ನೀಡಲಾಗಿದೆ. ಬರ ನಿರ್ವಹಣೆಯ ಬಗ್ಗೆ ಹೆಚ್ಚಿನ ಗಮನ ಹರಿಸುವಂತೆ ಗ್ರಾಮ ಮಟ್ಟದ ಟಾಸ್ಕ್‌ಫೋರ್ಸ್ ಸಮಿತಿಗಳಿಗೂ ಸಹ ಸೂಚಿಸಲಾಗಿದೆ ಎಂದರು. ಕುಡಿಯುವ ನೀರು ಮತ್ತು ಮೇವು ಪೂರೈಕೆಗೆ ಜಿಲ್ಲಾಧಿಕಾರಿಗಳ ಕಚೇರಿ ಸೇರಿದಂತೆ ಜಿಲ್ಲೆಯ ೭ ತಾಲೂಕುಗಳಲ್ಲಿಯೂ ಸಹಾಯವಾಣಿ ತೆರೆಯಲಾಗಿದೆ. ಖಾಸಗಿ ಬೋರವೆಲ್ ಮತ್ತು ಟ್ಯಾಂಕರ್ ಮೂಲಕ ಕುಡಿಯುವ ನೀರು ಸರಬರಾಜು ಮಾಡಲು ಎಲ್ಲಾ ರೀತಿಯ ವ್ಯವಸ್ಥೆ ಮಾಡಲಾಗಿದೆ. ಅಗತ್ಯ ಅನುದಾನ ಲಭ್ಯವಿದ್ದು, ಬರ ನಿರ್ವಹಣೆಗೆ ಯಾವುದೇ ಅನುದಾನ ಕೊರತೆ ಇರುವುದಿಲ್ಲ ಎಂದು ಜಿಲ್ಲಾಧಿಕಾರಿ ಮಾಹಿತಿ ನೀಡಿದ್ದಾರೆ.

**<><*<><>*><>**

ಈಗ ತುಮಕೂರು ಲೋಕಸಭಾ ಕ್ಷೇತ್ರದ ವಿವರಗಳು : ವರದಿಯನ್ನು ಸಿದ್ದಪಡಿಸಿದವರು ವಿಜಯಪುರ : ನಮ್ಮ ಜಿಲ್ಲಾ ಪ್ರತಿನಿಧಿ, ನೇತಾಜಿಗಾಂಧಿ ಠ್ಯಾಗೂರ್ ಮಹಾರಾಷ್ಟ್ರದ ಗಡಿಗೆ ಹೊಂದಿ ಕೊಂಡಿರುವ ಬಿಜಾಪುರ ಅಂದರೆ ವಿಜಯಪುರದಲ್ಲಿ ಬಿಸಿಲಿನ ತಾಪ ಏರುತ್ತಿದ್ದಂತೆ ಚುನಾವಣೆಯ ಕಾವೂ ಕೂಡಾ ಏರುತ್ತಲಿದೆ. ಭಾರತ ಚುನಾವಣೆ ಆಯೋಗವು ಲೋಕಸಭಾ ಸಾರ್ವತ್ರಿಕ ಚುನಾವಣೆ ೨೦೨೪ ರ ಅಧಿಸೂಚನೆಯನ್ನು ಹೊರಡಿಸಿದ್ದು ಜೂನ್ ೬ ರ ವರೆಗೆ ಮಾದರಿ ನೀತಿ ಸಂಹಿತೆ ಜಾರಿಯಲ್ಲಿದೆ. ಚುನಾವಣೆಯ ಅಧಿಸೂಚನೆಯನ್ನ ಏಪ್ರಿಲ್೧೨ ರಂದು ಹೊರಡಿಸಲಾಗುತ್ತದೆ. ಏ. ೧೯ ನಾಮಪತ್ರ ಸಲ್ಲಿಸುವ ಕೊನೆಯ ದಿನವಾಗಿದೆ. ಏ. ೨೦ರಂದು ನಾಮಪತ್ರಗಳ ಪರಿಶೀಲನೆ ನಡೆಯಲಿದೆ. ಏ. ೨೨ರಂದು ಉಮೇದುವಾರಿಕೆ ಹಿಂತೆಗೆದುಕೊಳ್ಳುವ ದಿನವಾಗಿದೆ. ಮೆ. ೭ ರಂದು ಮತದಾನ ಹಾಗೂ ಜೂನ ೪ ರಂದು ಮತ ಎಣಿಕೆ ಕಾರ್ಯ ನಡೆಯಲಿದೆ. ವಿಜಯಪುರ ಜಿಲ್ಲೆಯಲ್ಲಿ ಸುಸೂತ್ರವಾಗಿ ಚುನಾವಣೆ ನಡೆಸಲು. ೯ ಜನ ಸಹಾಯಕ ಚುನಾವಣೆ ಅಧಿಕಾರಿಗಳನ್ನು ನೇಮಿಸಲಾಗಿದೆ. ಜಿಲ್ಲೆಯಲ್ಲಿ ಒಟ್ಟು ೨೦೮೫ ಮತಗಟ್ಟೆಗಳಿದ್ದು, ೧೯ ಲಕ್ಷದ ೧೯ ಸಾವಿರದ ೪೮ ಜನ ಮತದಾರರಿದ್ದಾರೆ. ಇದರಲ್ಲಿ ೯ ಲಕ್ಷ ೪೨ ಸಾವಿರದ ೭೫೭ ಮಹಿಳಾ, ೯ ಲಕ್ಷದ ೪೨ ಸಾವಿರದ ೭೫೭ ಗಂಡು, ೨೧೮ ಇತರೆ ಮತದಾರರಿದ್ದಾರೆ. ೧೭ ಸಾವಿರದ ೫೯ ಜನರು ೮೫ ವರ್ಷ ಮೇಲ್ಪಟ್ಟ ಮತದಾರರು, ೨೧ ಸಾವಿರದ ೫೬೯ ವಿಶೇಷ ಚೇತನ ಮತದಾರರಿದ್ದಾರೆ. ೮೫ ವರ್ಷ ಮೇಲ್ಪಟ್ಟ ಮತದಾರರಿಗೆ ಮನೆಯಿಂದಲೇ ಮತದಾನ ಮಾಡಲು ಅವಕಾಶ ಕಲ್ಪಿಸಲಾಗುತ್ತದೆ. ಅಂಚೆ ಮತ ಪತ್ರ ವಿತರಿಸುವ ಕುರಿತಂತೆ ಭಾರತ ಚುನಾವಣೆ ಆಯೋಗವು ನೀಡುವ ನಿರ್ದೇಶನ ಅನುಸಾರ ಕ್ರಮ ವಹಿಸಿ ಪರಿಶೀಲಿಸಲಾಗುವುದು ಎಂದು ಜಿಲ್ಲಾಧಿಕಾರಿಗಳೂ ಸಹ ತಿಳಿಸಿದ್ದಾರೆ. ವಿಜಯಪುರ ಜಿಲ್ಲೆಯಲ್ಲಿ ಒಟ್ಟು ೨೯ ಚೆಕ್‌ಪೋಸ್ಟ್ ಗಳನ್ನು ಸ್ಥಾಪಿಸಲಾಗಿದ್ದು, ಅವುಗಳಲ್ಲಿ ೧೧ ಅಂತರ್ ರಾಜ್ಯ ಚೆಕ್‌ಪೋಸ್ಟ್, ೧೬ ಅಂತರ್ ಜಿಲ್ಲಾ ಚೆಕ್‌ಪೋಸ್ಟ್ ಗಳಿವೆ. ಚುನಾವಣೆ ಪ್ರಕ್ರಿಯೆ ಶಾಂತಿ ಸುವ್ಯವಸ್ಥೆಯಿಂದ ನಡೆಸಲು ೮ ಡಿವಾಯ್‌ಎಸ್ಪಿ, ೨೬ ಪಿಎಸ್, ೯೦ ಪಿಎಸ್‌ಐ, ೧೧೮ ಎಎಸ್‌ಐ, ೧,೮೮೮ ಪಿಸಿ, ೯೭೬ ಹೋಮ್‌ಗಾರ್ಡ ಸೇರಿ ಒಟ್ಟು ೩೧೦೬ ಸಿಬ್ಬಂದಿಗಳನ್ನು ನೇಮಕ ಮಾಡಲಾಗಿದೆ. ವಿಜಯಪುರ ಲೋಕಸಭಾ ಕ್ಷೇತ್ರವು ಮೀಸಲು ಕ್ಷೇತ್ರವಾಗಿದ್ದು, ಮುದ್ದೇಬಿಹಾಳ, ದೇವರ ಹಿಪ್ಪರಗಿ, ಬಸವನ ಬಾಗೇವಾಡಿ, ಬಬಲೇಶ್ವರ, ವಿಜಯಪುರ ನಗರ, ನಾಗಠಾಣ, ಇಂಡಿ ಮತ್ತು ಸಿಂದಗಿ ಹೀಗೆ ೦೮ ವಿಧಾನಸಭಾ ಕ್ಷೇತ್ರಗಳನ್ನು ಹೊಂದಿದೆ.

**<><*<><>*><>**

ಅಮೆರಿಕಾದ ನ್ಯೂಯಾರ್ಕ್‌ನಲ್ಲಿ ಮೇ ೨೯ರಿಂದ ಜೂನ್ ೨ರವರೆಗೆ ನಡೆಯಲಿರುವ ‘ವರ್ಲ್ಡ್ ಸೈನ್ಸ್ ಸ್ಕಾಲರ್ ಫೆಸ್ಟಿವಲ್’ಗೆ ದಕ್ಷಿಣ ಕನ್ನಡ ಜಿಲ್ಲೆಯ ಉಳ್ಳಾಲ ಮೊಗವೀರಪಟ್ಲದ ಕುಮಾರಿ ಸಿಂಧೂರ ರಾಜ ಅವರು ಆಯ್ಕೆಯಾಗಿದ್ದಾರೆ. ೨೨ ದೇಶಗಳ ೫೨ ಯುವ ವಿಜ್ಞಾನಿಗಳು ಈ ಉತ್ಸವದಲ್ಲಿ ಪಾಲ್ಗೊಳ್ಳಲಿದ್ದು, ಸಿಂಧೂರ ರಾಜ ಭಾರತವನ್ನು ಪ್ರತಿನಿಧಿಸಲಿದ್ದಾರೆ. ಅಲ್ಲಿ ಅವರು ನೊಬೆಲ್ ಪ್ರಶಸ್ತಿ ವಿಜೇತ ವಿಜ್ಞಾನಿಗಳ ಜೊತೆ ವಿಚಾರ ವಿನಿಮಯ ನಡೆಸಲಿದ್ದಾರೆ. ಮೊಗವೀರಪಟ್ಲದ ರಾಜ ಟಿ ಮತ್ತು ಶಿಬಾನಿ ದಂಪತಿಯ ಪುತ್ರಿಯಾಗಿರುವ ಸಿಂಧೂರ ಬೆಂಗಳೂರಿನ ಇಂದಿರಾ ನಗರದ ನ್ಯೂ ಹೊರೈಝುನ್ ಪಬ್ಲಿಕ್ ಶಾಲೆಯ ೧೦ನೇ ತರಗತಿ ವಿದ್ಯಾರ್ಥಿನಿಯಾಗಿದ್ದಾರೆ. ಅಮೆರಿಕಾದ ಫ್ಯೂಚರ್ ಪೋರ್ಟ್ ಯೂತ್-೨೦೨೩ ಪ್ರೇಗ್ ಚೆಕ್ ರಿಪಬ್ಲಿಕ್ ಆಯೋಜಿಸಿದ್ದ ‘ಮಾನವ ಸಮಾಜಕ್ಕೆ ವರದಾನವಾಗಲಿರುವ ವಿಷಯಗಳು’ ಕುರಿತಾದ ಅಂತಾರಾಷ್ಟ್ರೀಯ ಮಟ್ಟದ ಸ್ಪರ್ಧೆಯಲ್ಲಿ

ಭಾಗವಹಿಸಿದ್ದ ಸಿಂಧೂರ ೧ ಲಕ್ಷದ ೭೭ ಸಾವಿರ ನಗದು ಬಹುಮಾನದೊಂದಿಗೆ ಪ್ರಥಮ ಸ್ಥಾನ ಪಡೆದು ಆಯ್ಕೆಯಾಗಿದ್ದಾರೆ. ಕುಮಾರಿ ಸಿಂಧೂರ ಅವರು, ಅರ್ಟಿಫಿಷಿಯಲ್ ಇಂಟಲಿಜೆನ್ಸ್ ಮಾಡಲ್ ಸಿ.ಬಿ.ಫ್ಲೋ ಕುರಿತಾದ ಆವಿಷ್ಕಾರ ಮಂಡಿಸಿದ್ದರು.

**<><*<><>*><>**

ಇದೇ ತಿಂಗಳು ೧೭ ರಿಂದ ೧೯ ರಂದು ನಡೆಯಲಿರುವ ಸಿಇಟಿ ಪರೀಕ್ಷೆಗೆ ವಿದ್ಯಾರ್ಥಿಗಳು ಸಿಇಟಿ ಪೋರ್ಟಲ್ ಸೂಕ್ತ ರೀತಿಯಲ್ಲಿ ಕಾರ್ಯವಹಿಸಿದ ಕಾರಣ ವಿದ್ಯಾರ್ಥಿಗಳಿಗೆ ತೊಂದರೆಯಾಗಿದೆ ಎಂದು ಮಾಜಿ ಸಚಿವ ಸುರೇಶ್ ಕುಮಾರ್ ಉನ್ನತ ಶಿಕ್ಷಣ ಸಚಿವರಾದ ಡಾ.ಎಂ.ಸಿ. ಸುಧಾಕರ್ ಅವರಿಗೆ ಪತ್ರ ಬರೆದಿದ್ದಾರೆ.  ಕರ್ನಾಟಕ ಪರೀಕ್ಷಾ ಪ್ರಾಧಿಕಾರ ಸಿಇಟಿ ಪೋರ್ಟಲ್‌ನ್ನು ಆರೋಗ್ಯಕರ ಸ್ಥಿತಿಯಲ್ಲಿ ನಿರ್ವಹಿಸುವಂತೆ  ಸಲಹೆ ನೀಡಿರುವ ಶಾಸಕ ಸುರೇಶ್‌ಕುಮಾರ್ ಸಿಇಟಿ ಪರೀಕ್ಷೆಗೆ ಸಿದ್ಧವಾಗುತ್ತಿರುವ ಎಲ್ಲ ವಿದ್ಯಾರ್ಥಿಗಳ ಆತಂಕವನ್ನು ದೂರ ಮಾಡುವಂತೆ ಕೋರಿದ್ದಾರೆ. ಉನ್ನತ ಶಿಕ್ಷಣ ಸಚಿವರು ತುರ್ತುಕ್ರಮ ಕೈಗೊಳ್ಳುವಂತೆ ಆಗ್ರಹಿಸಿದ್ದಾರೆ.

**<><*<><>*><>**

ಇನ್ನು ಹವಾವರ್ತಮಾನ...

ದಕ್ಷಿಣ ಒಳನಾಡಿನ ಒಂದೆರಡು ಕಡೆಗಳಲ್ಲಿ ಮಳೆಯಾಗಿದೆ. ಕರಾವಳಿ ಮತ್ತು ಉತ್ತರ ಒಳನಾಡಿನಲ್ಲಿ ಒಣಹವೆ ಇತ್ತು.

ರಾಜ್ಯದಲ್ಲಿ ಅತಿ ಗರಿಷ್ಠ ಉಷ್ಣಾಂಶ ೪೨.೮ ಡಿಗ್ರಿ ಸೆಲ್ಸಿಯಸ್ ಕಲಬುರಗಿಯಲ್ಲಿ ದಾಖಲಾಗಿದೆ.

ಮುನ್ಸೂಚನೆಯಂತೆ ಕೊಡುಗು, ಚಿಕ್ಕಮಗಳೂರು ಮತ್ತು ಹಾಸನ ಜಿಲ್ಲೆಗಳ ಒಂದೆರಡು ಸ್ಥಳಗಳಲ್ಲಿ ಹಗುರ ಮಳೆಯಾಗುವ ಸಾಧ್ಯತೆಯಿದ್ದು, ರಾಜ್ಯದ ಉಳಿದ ಜಿಲ್ಲೆಗಳಲ್ಲಿ ಒಣಹವೆ ಸಾಧ್ಯತೆ ಇದೆ.

ಮುಂದಿನ ಎರಡು ದಿನಗಳಲ್ಲಿ ದಕ್ಷಿಣಕನ್ನಡ, ಉಡುಪಿ ಮತ್ತು ಉತ್ತರ ಕನ್ನಡ ಜಿಲ್ಲೆಗಳಲ್ಲಿ ೨-೪ ಡಿಗ್ರಿ ತಾಪಮಾನ ಹೆಚ್ಚಾಗುವ ಸಾಧ್ಯತೆಯಿದೆ.

ಮುಂದಿನ ೨೪ ಗಂಟೆಗಳಲ್ಲಿ ಬೆಂಗಳೂರು ನಗರ ಸೇರಿದಂತೆ ಸುತ್ತಮುತ್ತಲಿನ ಪ್ರದೇಶಗಳಲ್ಲಿ ಸಂಜೆ ವೇಳೆಗೆ ನಿರ್ಮಲ ಆಕಾಶವಿರಲಿದ್ದು, ಗರಿಷ್ಠ ಉಷ್ಣಾಂಶ ೩೮ ಮತ್ತು ಕನಿಷ್ಠ ೨೩ ಡಿಗ್ರಿ ಸೆಲ್ಸಿಯಸ್ ಇರುವ ಸಂಭವವಿದೆ.

**<><*<>  ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <>*><>**

**<><*<> ನಮ್ಮ ಮುಂದಿನ ವಾರ್ತಾ ಪ್ರಸಾರ ರಾತ್ರಿ ೭.೩೫ ಕ್ಕೆ <>*><>**